ಹರಿಶ್ಚಂದ್ರ ಘಾಟ್‌ನಲ್ಲಿರುವ ವಿದ್ಯುತ್ ಚಿತಾಗಾರ ಕುರಿತು

347 - ಶ್ರೀ ಕೆ. ಲಕ್ಕಣ್ಣ (ರಾಜಾಜಿನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹರಿಶ್ಚಂದ್ರ ಘಾಟ್ನಲ್ಲಿರುವ ವಿದ್ಯುತ್ ಚಿತಾಗಾರವನ್ನು ಯಾವಾಗ ಪ್ರಾರಂಭಿಸಲಾಯಿತು?

ಆ) ಶವವನ್ನು ಭಸ್ಮ ಮಾಡುವ ಆ ಯಂತ್ರದ ಆಯಸ್ಸು ಎಷ್ಟು?

ಇ) ಅಲ್ಲಿನ ಚಿತಾಗಾರದಿಂದ ಹೊರಬರುತ್ತಿರುವ ದುರ್ವಾಸನೆಯಿಂದ ಅಲ್ಲಿನ ಸುತ್ತಮುತ್ತಲ ನಿವಾಸಿಗಳ ಆರೋಗ್ಯದ ಬಗ್ಗೆ ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಅದನ್ನು ತಡೆಗಟ್ಟಲು ಆಧುನಿಕ ಯಂತ್ರವನ್ನು ಅಳವಡಿಸುವುದಕ್ಕೆ ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಉ) ಹಾಗಿದ್ದಲ್ಲಿ ಎಷ್ಟು ದಿವಸಗಳಲ್ಲಿ ಅದನ್ನು ಕಾರ್ಯಗತ ಮಾಡಲಾಗುವುದು?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು) :

ಅ) ಜನವರಿ 1981ರಲ್ಲಿ

ಆ) 10000 ಶವಗಳನ್ನು ಸುಡುವವರೆವಿಗೂ.

ಇ) ಹೌದು

ಈ) ಹೌದು

ಉ) ತಜ್ಞರ ಅಭಿಪ್ರಾಯ ಪಡೆದ ನಂತರ.

ಅಪಘಾತಗಳ ಪರಿಹಾರ ಶಾಶ್ವತ ನಿಧಿ

527 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಸಮಾಜ ಕಲ್ಯಾಣ ಮತ್ತು ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತ್ತೀಚಿಗೆ ಬೆಂಗಳೂರು ಮತ್ತು ಸಿಂಧನೂರುಗಳಲ್ಲಿ ನಡೆದಂತಹ ಬೆಂಕಿ ಅಪಘಾತಗಳ ಪ್ರಕರಣಗಳಲ್ಲಿ ಮರಣ ಹೊಂದಿದವರ ಕುಟುಂಬಗಳಿಗೆ, ನೊಂದವರಿಗೆ ಮತ್ತು ಆಸ್ತಿಪಾಸ್ತಿಗಳನ್ನು ಕಳೆದುಕೊಂಡವರಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಕೊಟ್ಟಿರುವ ಹಣ ಎಷ್ಟು?

ಆ) ಪ್ರಧಾನಮಂತ್ರಿಗಳ ಪರಿಹಾರ ನಿಧಿಯಿಂದ ಅದಕ್ಕೆ ಪರಿಹಾರವೇನಾದರೂ ಬಂದಿದೆಯೇ?

ಇ) ಅಂತಹ ಅಪಘಾತಗಳ ಪರಿಹಾರಕ್ಕಾಗಿ ಶಾಶ್ವತ ನಿಧಿಯ ವ್ಯವಸ್ಥೆಯನ್ನು ಮಾಡಲು ಸಾಧ್ಯವೇ?

ಶ್ರೀ ಧರ್ಮಸಿಂಗ್ (ಕಂದಾಯ ಮತ್ತು ಸಮಾಜ ಕಲ್ಯಾಣ ಸಚಿವರು) :

ಅ) ದಿನಾಂಕ 4.3.1994ರಂದು ಬೆಂಗಳೂರು ನಗರ ಮತ್ತು ಸಿಂಧನೂರುಗಳಲ್ಲಿ ಸಂಭವಿಸಿದ ಬೆಂಕಿ ದುರಂತಕ್ಕೆ ಸಂಬಂಧಿಸಿದಂತೆ, ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಯಾವುದೇ ಹಣವನ್ನು ನೀಡಿರುವುದಿಲ್ಲ; ಆದಾಗ್ಯೂ ನೊಂದ ಸಂತ್ರಸ್ಥರ ಸಂಕಷ್ಟ ನಿವಾರಿಸಲು ಕೆಳಕಂಡ ಪರಿಹಾರ ಹಾಗೂ ಪುನರ್ ವಸತಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ